# ಕರ್ನಾಟಕ ಲೋಕಾಯುಕ್ತ

ನಂ. ಕಂಪ್ಲೆಂಟ್/ಉಪಲೋಕ್/ಜಿಎಲ್‌ಬಿ/1230/2021
ಮಂಡನಾಧಿಕಾರಿಗಳ ಶಾಖೆ, ಪಿ.ಒ. ಎ.ಆರ್.ಇ.17

ಬಹುಮಹಡಿಗಳ ಕಟ್ಟಡ,
ಡಾ: ಅಂಬೇಡ್ಕರ್ ವೀದಿ, ಬೆಂಗಳೂರು,
ದಿನಾಂಕ: 16/10/2021

## ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ರ ಕಲಂ 12(3)ರ ಅನ್ವಯ ವರದಿ

*****

ವಿಷಯ: ಸರ್ಕಾರಿ ನೌಕರರಾದ ರಾಯಚೂರು ಜಿಲ್ಲೆ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಜಿಲ್ಲಾ ಪಂಚಾಯತ್ ಕಛೇರಿಯಲ್ಲಿ ಪ್ರಥಮ ದರ್ಜೆ ಲೆಕ್ಕ ಸಹಾಯಕರಾದ ಶ್ರೀ ಬಸವರಾಜಪ್ಪಗೌಡ ತಂದೆ ಅಯ್ಯನಗೌಡ ರವರು ಕರ್ತವ್ಯ ಲೋಪ/ದುರ್ನಡತೆ ಎಸಗಿರುವ ಬಗ್ಗೆ.

*****

1) ಪೋಲೀಸ್ ಅಧೀಕ್ಷಕರು, ಭ್ರಷ್ಟಾಚಾರ ನಿಗ್ರಹ ದಳ, ರಾಯಚೂರು, ಇವರು ರಾಯಚೂರು ಜಿಲ್ಲೆಯ ಭ್ರಷ್ಟಾಚಾರ ನಿಗ್ರಹ ದಳ ಪೋಲೀಸ್ ಠಾಣೆಯ ಪೋಲೀಸ್ ನಿರೀಕ್ಷಕರು (ಇನ್ನು ಮುಂದೆ ತನಿಖಾಧಿಕಾರಿ ಎಂದು ಕರೆಯಲ್ಪಡುತ್ತಾರೆ.) ಸಲ್ಲಿಸಿದ ತನಿಖಾ ವರದಿ ಮತ್ತು ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸಿದಾಗ ವರದಿಯಲ್ಲಿ ಶ್ರೀ ಬಸವರಾಜಪ್ಪಗೌಡ ತಂದೆ ಅಯ್ಯನಗೌಡ, ಪ್ರಥಮ ದರ್ಜೆ ಲೆಕ್ಕ ಸಹಾಯಕರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಜಿಲ್ಲಾ ಪಂಚಾಯತ್, ರಾಯಚೂರು ಜಿಲ್ಲೆ (ಇನ್ನು ಮುಂದೆ 'ಎದುರುದಾರರು' ಎಂದು ಕರೆಯಲ್ಪಡುತ್ತಾರೆ.) ದೂರುದಾರರಾದ ಶ್ರೀ ವೆಂಕಟೇಶ ಎನ್. ತಂದೆ ಲಿಂಗನಗೌಡ, ವಾಸ: ಗೌರಂಪೇಟೆ, ದೇವದುರ್ಗ, ತಾ: ದೇವದುರ್ಗ, ಜಿ: ರಾಯಚೂರು (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು ಎದುರುದಾರರನ್ನು ಭೇಟಿ ಮಾಡಿದಾಗ ಲಂಚದ ಹಣಕ್ಕೆ ಬೇಡಿಕೆ ಇಟ್ಟು ಅದನ್ನು ಪಡೆದು ದುರ್ನಡತೆ ತೋರಿಸಿರುವುದು ಮೇಲ್ನೋಟಕ್ಕೆ ಕಂಡುಬಂದಿದ್ದರಿಂದ ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ರ ಕಲಂ 7 ರನ್ವಯ ಗೌರವಾನ್ವಿತ ಉಪಲೋಕಾಯುಕ್ತರವರು ಸ್ವಯಂ ಪ್ರೇರಿತ ತನಿಖೆ ಕೈಗೊಂಡಿರುತ್ತಾರೆ.

2) ದೂರಿನ ಸಂಕ್ಷಿಪ್ತ ವಿವರಣೆ:-ದೂರುದಾರರಾದ ಶ್ರೀ ವೆಂಕಟೇಶ ಎನ್. ತಂದೆ ಲಿಂಗನಗೌಡ ಇವರು ದೇವದುರ್ಗ ತಾಲ್ಲೂಕಿನ ಸುಂಕೇಶ್ವರಹಾಳ ಗ್ರಾಮದ "ಸ್ವಾಮಿ

ವಿವೇಕಾನಂದ ಪದವಿ ಪೂರ್ವ ಕಾಲೇಜಿನ" ಕಟ್ಟಡ ನಿರ್ಮಾಣದ ಕಾಮಗಾರಿ ಪೂರ್ಣಗೊಂಡ ನಂತರ ರೂ. 11,000/- ಚೆಕ್ ನೀಡಲು ಲಂಚದ ಹಣಕ್ಕೆ ಬೇಡಿಕೆ ಇಟ್ಟಿದ್ದು ಇರುತ್ತದೆ. ಆದ್ದರಿಂದ ದೂರುದಾರರು ಲಂಚದ ಹಣ ನೀಡಲು ಇಷ್ಟವಿಲ್ಲದ ಕಾರಣ ದೂರುದಾರರು ಎದುರುದಾರರೊಂದಿಗೆ ಸಂಭಾಷಣೆಯ ಧ್ವನಿ ಮುದ್ರಿತ ಮೊಬೈಲ್‌ನೊಂದಿಗೆ ದೂರನ್ನು 19/12/2017 ರಂದು ನೀಡಿರುತ್ತಾರೆ. ಈ ಬಗ್ಗೆ ರಾಯಚೂರು ಜಿಲ್ಲೆಯ ಭ್ರಷ್ಟಾಚಾರ ನಿಗ್ರಹದಳ ಪೊಲೀಸ್ ಠಾಣೆಯ ಅಧಿಕಾರಿಯವರು ತಮ್ಮ ಠಾಣೆಯ ಗುನ್ನೆ ನಂ. 05/2017 ರಲ್ಲಿ ಪ್ರಕರಣ ನೋಂದಾಯಿಸಿಕೊಂಡಿರುತ್ತಾರೆ.

3) ತನಿಖಾಧಿಕಾರಿಗಳು ದಿನಾಂಕ 19/12/2017 ರಂದು ನೆರಳು ಸಾಕ್ಷಿ ಶ್ರೀ ರಮೇಶ್ ತಂದೆ ಶಿಶುಪಾಲ, ಕರವಸೂಲಿಗಾರ, ನಗರಸಭೆ, ರಾಯಚೂರು ಹಾಗೂ ಸಹ ಪಂಚರನ್ನು ಠಾಣೆಗೆ ಬರ ಮಾಡಿಕೊಂಡು ದೂರುದಾರರನ್ನು ಪರಿಚಯಿಸಿ ಅವರಿಂದ ದೂರಿನ ವಿಷಯವನ್ನು ತಿಳಿದ ನಂತರ ಮೊಬೈಲ್‌ನಲ್ಲಿ ರೆಕಾರ್ಡ್ ಮಾಡಿದ ಸಂಭಾಷಣೆಯನ್ನು ಪಂಚರಿಗೆ ಕೇಳಿಸಿ, ಅದನ್ನು ಲಿಪಿಕರಣ ಮಾಡಿ ಅದನ್ನು ಸಿ.ಡಿ.ಗೆ ವರ್ಗಾಯಿಸಿದ್ದು ಇರುತ್ತದೆ. ನಂತರ ಲಂಚದ ಹಣ ರೂ. 11,000/- ದೂರುದಾರರು ಹಾಜರುಪಡಿಸಿದ್ದು ಅವುಗಳ ಮುಖಬೆಲೆ ಮತ್ತು ನೋಟಿನ ಸಂಖ್ಯೆ ಪ್ರತ್ಯೇಕ ಹಾಳೆಯಲ್ಲಿ ನಮೂದಿಸಿ ಪಂಚರ ಮತ್ತು ತನಿಖಾಧಿಕಾರಿಗಳ ಸಹಿ ಪಡೆಯಲಾಯಿತು. ಸದರಿ ಹಣಕ್ಕೆ ಪಿನಾಪ್ತಲಿನ್ ಪೌಡರ್ ಲೇಪಿಸಿ ಸೋಡಿಯಂ ಕಾರ್ಬೋನೇಟ್ ದ್ರಾವಣ ತಯಾರಿಸಿ ಸದರಿ ದ್ರಾವಣದಲ್ಲಿ ನೋಟುಗಳಿಗೆ ಪಿನಾಪ್ತಲಿನ್ ಪೌಡರ್ ಲೇಪಿಸಿದ ಪಂಚನ ಕೈ ಬೆರಳುಗಳನ್ನು ದ್ರಾವಣದಲ್ಲಿ ಅದ್ದಿ ತೆಗೆದಾಗ ಅದು ತಿಳಿ ಗುಲಾಬಿ ಬಣ್ಣಕ್ಕೆ ಬಂದಿರುತ್ತದೆ. ಈ ಬಗ್ಗೆ ಮಾದರಿ ದ್ರಾವಣ ಹಾಗೂ ಗುಲಾಬಿ ಬಣ್ಣಕ್ಕೆ ತಿರುಗಿದ ದ್ರಾವಣವನ್ನು ಪ್ರತ್ಯೇಕವಾಗಿ ವಶಪಡಿಸಿಕೊಂಡು ಹಂತ ಹಂತವಾಗಿ ಫೋಟೋಗಳನ್ನು ತೆಗೆಸಿ ಪ್ರಕರಣದ ಮಾಹಿತಿ ಗೌಪ್ಯತೆಯನ್ನು ಕಾಪಾಡಿಕೊಳ್ಳಲು ತನಿಖಾಧಿಕಾರಿಯವರು ಸೂಚಿಸಿರುತ್ತಾರೆ. ಸಂಭಾಷಣೆಯ ಸಿ.ಡಿ.ಯನ್ನೂ ಸಹ ವಶಪಡಿಸಿಕೊಂಡಿರುತ್ತಾರೆ. ಶ್ರೀ ರಮೇಶ ತಂದೆ ಶಿಶುಪಾಲ ಇವರನ್ನು ನೆರಳು ಸಾಕ್ಷಿಯಾಗಿ ನೇಮಿಸಿ ದೂರುದಾರರೊಂದಿಗೆ ಎದುರುದಾರರ ಬಳಿಹೋಗಿ ಅವರಿಗೆ ಅನುಮಾನ ಬಾರದಂತೆ ಮತ್ತು ಎದುರುದಾರರು ಹಾಗೂ ಪಿರ್ಯಾದಿಯ ನಡುವೆ ನಡೆದ ಸಂಭಾಷಣೆಯನ್ನು ಕೇಳಿಸಿಕೊಂಡು ಘಟನೆಯನ್ನು ವೀಕ್ಷಿಸಿ, ಎದುರುದಾರರು ಹಣವನ್ನು ಕೇಳಿ ಪಡೆದುಕೊಂಡರೆ, ಹಣವನ್ನು ಹೇಗೆ ಪಡೆದುಕೊಳ್ಳುತ್ತಾರೆ, ಹಣವನ್ನು ಎಲ್ಲಿ ಇಟ್ಟುಕೊಳ್ಳುತ್ತಾರೆ ಎಂಬುದನ್ನು ಗಮನಿಸಿ ನಂತರ ತಿಳಿಸಬೇಕೆಂದು ತನಿಖಾಧಿಕಾರಿಯವರು ತಿಳಿಸಿರುತ್ತಾರೆ. ದೂರುದಾರರಿಗೆ ಸೋನಿ

ಕಂಪನಿಯ ವಾಯ್ಸ್ ರೆಕಾರ್ಡರನ್ನು ನೀಡಿದ್ದು ಅದನ್ನು ತನ್ನ ಮತ್ತು ಎದುರುದಾರರ ಮಧ್ಯೆ ನಡೆಯುವ ಧ್ವನಿ ಸಂಭಾಷಣೆಯನ್ನು ಮುದ್ರಣ ಮಾಡಿಕೊಳ್ಳಲು ಸೂಚಿಸಿರುತ್ತಾರೆ. ದೂರುದಾರರಿಗೆ ಎದುರುದಾರರು ಲಂಚದ ಹಣ ಬೇಡಿಕೆ ಇಟ್ಟು ಸ್ವೀಕರಿಸಿದ ನಂತರ ತನ್ನ ಎಡಗೈಗೆ ಕಟ್ಟಿಕೊಂಡಿರುವ ವಾಚನ್ನು ಬಿಚ್ಚಿ ಮತ್ತೆ ಕಟ್ಟಿಕೊಳ್ಳುವ ಮೂಲಕ ಸೂಚನೆ ನೀಡಬೇಕೆಂದು ಸೂಚಿಸಿರುತ್ತಾರೆ. ಈ ಬಗ್ಗೆ ಸವಿಸ್ತಾರ ಪ್ರಾಯೋಗಿಕ ಪಂಚನಾಮೆಯನ್ನು ನಿರ್ವಹಿಸಿರುತ್ತಾರೆ.

4) ದಿನಾಂಕ 20/12/2017 ರಂದು ಪಂಚಾಯತ್ ರಾಜ್, ಇಂಜನೀಯರಿಂಗ್ ವಿಭಾಗ, ರಾಯಚೂರಿನ ನಗರ ಶಾಖೆಯಲ್ಲಿ ಎದುರುದಾರರು ದೂರುದಾರರಿಂದ ಪಿನಾಪ್ತಲಿನ್ ಪೌಡರ್ ಲೇಪಿತ 11,000/- ರೂ. ಲಂಚದ ಹಣಕ್ಕಾಗಿ ಬೇಡಿಕೆ ಇಟ್ಟು ಎದುರುದಾರರು ಬಲಗೈಯಿಂದ ಪಡೆದು ಎರಡೂ ಕೈಯಲ್ಲಿ ಹಿಡಿದುಕೊಂಡು ನಂತರ ಎಡಗೈಯಿಂದ ತನ್ನ ಪ್ಯಾಂಟಿನ ಎಡಗಡೆ ಬದಿಯ ಸೈಡ್ ಜೇಬಿನಲ್ಲಿ ಇಟ್ಟುಕೊಂಡಿರುತ್ತಾರೆ. ನಂತರ ದೂರುದಾರರು ಹೊರಗಡೆ ಬಂದು ತನ್ನ ಎಡಗೈಗೆ ಕಟ್ಟಿರುವ ವಾಚನ್ನು ಬಿಚ್ಚಿ ಮತ್ತೆ ಕಟ್ಟಿಕೊಳ್ಳುವ ಮೂಲಕ ಸೌಜ್ಞೆಯನ್ನು ನೀಡಿದರು. ತಕ್ಷಣ ಜೊತೆಯಲ್ಲಿದ್ದ ಕೊ-ಪಂಚ ಉಳಿದ ಸಿಬ್ಬಂಧಿ ಮತ್ತು ತನಿಖಾಧಿಕಾರಯವರು ಎದುರುದಾರರ ಕಛೇರಿಯ ಒಳಗೆ ಬಂದು ಅಲ್ಲಿಯ ನಡುವಳಿಕೆಗಳನ್ನು ತಿಳಿದು ಪಿನಾಪ್ತಲಿನ್ ಲೇಪಿತ ಲಂಚದ ಹಣ ರೂ. 11,000/- ವನ್ನು ಎದುರುದಾರರು ಧರಿಸಿದ್ದ ಪ್ಯಾಂಟಿನ ಎಡಗಡೆ ಬದಿಯ ಸೈಡ್ ಜೇಬಿನಿಂದ ತೆಗೆದು ಹಾಜರುಪಡಿಸಿದ್ದು ಸದರಿ ನೋಟುಗಳ ಮುಖಬೆಲೆ ಹಾಗೂ ಕ್ರಮ ಸಂಖ್ಯೆ ಪ್ರಾಯೋಗಿಕ ಪಂಚನಾಮೆ ಕಾಲಕ್ಕೆ ಬರೆದುಕೊಂಡಂತಹ ನೋಟುಗಳ ಮುಖಬೆಲೆ ಮತ್ತು ಕ್ರಮ ಸಂಖ್ಯೆಯು ತಾಳೆಯಾಗಿದ್ದು ಇರುತ್ತದೆ. ತನಿಖಾಧಿಕಾರಿಗಳು ಎದುರುದಾರರ ಎರಡೂ ಕೈಗಳನ್ನು ಪ್ರತ್ಯೇಕವಾಗಿ ಸೋಡಿಯಂ ಕಾರ್ಬೋನೇಟ್ ದ್ರಾವಣದಲ್ಲಿ ಅದ್ದಿದಾಗ ಸದರಿ ದ್ರಾವಣವು ತಿಳಿ ಗುಲಾಬಿ ಬಣ್ಣಕ್ಕೆ ತಿರುಗಿದ್ದು ಸದರಿ ದ್ರಾವಣಗಳನ್ನು ಪ್ರತ್ಯೇಕ ಪ್ಲಾಸ್ಟಿಕ್ ಬಾಟಲ್‌ಗಳಲ್ಲಿ ಸಂಗ್ರಹಿಸಿ ಸೀಲ್ ಮಾಡಿ ವಶಪಡಿಸಿಕೊಂಡಿರುತ್ತಾರೆ. ಹಾಗೂ ಪಿನಾಪ್ತಲಿನ್ ಲೇಪಿತ ಲಂಚದ ಹಣವನ್ನು ಇಟ್ಟುಕೊಂಡಂತಹ ಎದುರುದಾರರಿಗೆ ಬದಲೀ ಪ್ಯಾಂಟಿನ ವ್ಯವಸ್ಥೆ ಮಾಡಿ ಅವರು ಧರಿಸಿದ್ದ ಪ್ಯಾಂಟನ್ನೂ ವಶಪಡಿಸಿಕೊಂಡಿರುತ್ತಾರೆ. ನಂತರ ತನಿಖಾಧಿಕಾರಿಗಳು ಎದುರುದಾರರು ಧರಿಸಿದ್ದ ಪ್ಯಾಂಟಿನ ಜೇಬನ್ನು ಸೋಡಿಯಂ ಕಾರ್ಬೋನೇಟ್ ದ್ರಾವಣದಲ್ಲಿ ಅದ್ದಿದಾಗ ಸದರಿ ದ್ರಾವಣವು ತಿಳಿ ಗುಲಾಬಿ ಬಣ್ಣಕ್ಕೆ ತಿರುಗಿದ್ದು ಸದರಿ ದ್ರಾವಣಗಳನ್ನು ಪ್ರತ್ಯೇಕ ಪ್ಲಾಸ್ಟಿಕ್ ಬಾಟಲ್‌ಗಳಲ್ಲಿ ಸಂಗ್ರಹಿಸಿ ಸೀಲ್ ಮಾಡಿ ವಶಪಡಿಸಿಕೊಂಡಿರುತ್ತಾರೆ. ಆ

ಸಮಯದಲ್ಲಿ ಅಲ್ಲೇ ಇದ್ದ ಶ್ರೀ ವಾದಿರಾಜ್, ಎಫ್.ಡಿ.ಎ. ಪ್ರಭಾರ ಅಕೌಂಟ್ ಸೂಪರಿನ್‌ಟೆಂಡೆಂಟ್ ರವರಿಗೆ ಎದುರುದಾರರ ವಿರುದ್ಧ ಪ್ರಕರಣ ದಾಖಲಾದ ಬಗ್ಗೆ ಮಾಹಿತಿಯನ್ನು ನೀಡಿ ಪ್ರಾಯೋಗಿಕ ಪಂಚನಾಮೆ ಕಾಲದಲ್ಲಿ ಎದುರುದಾರ ಮತ್ತು ದೂರುದಾರರ ಮಧ್ಯೆ ನಡೆದ ಸಂಭಾಷಣೆಯುಳ್ಳ ಸಿ.ಡಿ.ಯನ್ನು ಲ್ಯಾಪ್‌ಟಾಪ್‌ಗೆ ಹಾಕಿ ಧ್ವನಿ ಮುದ್ರಿಸಿ ಆಲಿಸಿದಾಗ ಅದರಲ್ಲಿ ಎದುರುದಾರರ ಧ್ವನಿಯನ್ನು ಗುರುತಿಸಿದ್ದು ಇರುತ್ತದೆ. ದೂರುದಾರರ ಫೈಲ್‌ಗೆ ಸಂಬಂಧಿಸಿದ ದಾಖಲಾತಿಗಳು ತನಿಖಾಧಿಕಾರಿಗಳು ವಶಪಡಿಸಿಕೊಂಡಿರುತ್ತಾರೆ.

5) ತನಿಖಾಧಿಕಾರಿಯವರು ಸವಿಸ್ತಾರ ಜಪ್ತಿ ಪಂಚನಾಮೆ ಪೂರೈಸಿದ ನಂತರ ಎದುರುದಾರರನ್ನು ದಸ್ತಗಿರಿ ಮಾಡಿರುತ್ತಾರೆ.

6) ಸದರಿ ಹಣದ ಬಗ್ಗೆ ತನಿಖಾಧಿಕಾರಿಯು ಎದುರುದಾರನ್ನು ವಿಚಾರಿಸಿದಾಗ "ದೂರುದಾರರು ಚೆಕ್ಕನ್ನು ನೀಡಲು ಕೇಳಿದರು ಸಂದರ್ಭದಲ್ಲಿ ನನ್ನ ಕೈಗೆ ಕೆಲ 2,000/- ರೂಪಾಯಿಗಳ ನೋಟಿರುವ ಹಣವನ್ನು ನೀಡಿ ಹೊರಟು ಹೋದರು. ತದನಂತರ ನಾನು ಸದರಿಯವರಿಗೆ ಹುಡುಕಿ ಹೊರಬಂದಾಗ ನಗದು ಶಾಖೆಯಲ್ಲಿ ಉಪಸ್ಥಿತರಿದ್ದರು. ಆಗ ನಾನು ನಗದು ಶಾಖೆಯಲ್ಲಿ ಸದರಿಯವರ ಸ್ವಾಮಿ ವಿವೇಕಾನಂದ ಶಾಲೆ ಅನುದಾನದ ಕಾಮಗಾರಿ ಚೆಕ್ ಬಗ್ಗೆ ವಿಚಾರಿಸಿದಾಗ ಇನ್ನೂ ಚೆಕ್ಕನ್ನು ಬರೆಯುವದಿದ್ದು ತಿಳಿದು ಬಂದು ಚೆಕ್ಕನ್ನು ಬರೆದು ಸಂಬಂಧಿಸಿದ ಗುತ್ತಿಗೆದಾರರಿಗೆ ಹಸ್ತಾಂತರಿಸಲು ತಿಳಿಸಿ ನನಗೆ ನೀಡಿದ 2,000/- ರೂಪಾಯಿ ಹಣವನ್ನು ಏಕೆ ನೀಡಿದ್ದೀರಿ ಎಂದು ತಿಳಿಸಿ ಹಣವನ್ನು ವಾಪಸ್ ನೀಡಲು ದೂರುದಾರರನ್ನು ಹುಡುಕಿ ನನ್ನ ಲೆಕ್ಕ ಶಾಖೆಗೆ ಹೊರಡುವ ಸಮಯದಲ್ಲಿ ನನ್ನನ್ನು ಎಸಿಬಿ ಅಧಿಕಾರಿಗಳು ಹಿಡಿದಿರುತ್ತಾರೆ" ಎಂದು ವಿವರಣೆಯನ್ನು ನೀಡಿದ್ದು ಇದು ಸರಿಯಾದ, ತೃಪ್ತಿದಾಯಕವಾದ ಉತ್ತರ/ ವಿವರಣೆ ಆಗಿರುವುದಿಲ್ಲ.

7) ಸಾಕ್ಷಿದಾರರ ಹೇಳಿಕೆಗಳು, ದೂರು ಅರ್ಜಿ ಹಾಗೂ ತನಿಖಾಧಿಕಾರಿ ಸಂಗ್ರಹಿಸಿದ ದಾಖಲೆ ಮತ್ತು ಇತರ ಅಂಶಗಳು, ಎದುರುದಾರರ ಸತತವಾದ ದುರ್ನಡತೆಯನ್ನು ತೋರಿಸುತ್ತದೆ.

8) ಧ್ವನಿ ವಿಶ್ಲೇಷಣಾ ವರದಿಯಲ್ಲಿ ಮೊಬೈಲ್ ಧ್ವನಿ ಮುದ್ರಣವು ಎದುರುದಾರರ ಧ್ವನಿಯೊಂದಿಗೆ ತಾಳೆಯಾಗಿರುವುದು ಧೃಢಪಟ್ಟಿರುತ್ತದೆ ಹಾಗೂ ರಾಸಾಯನಿಕ ತಜ್ಞರ ಪರೀಕ್ಷಾ ವರದಿಯಲ್ಲಿ ಎದುರುದಾರರಿಂದ ತನಿಖಾಧಿಕಾರಿಗಳು ಸಂಗ್ರಹಿಸಿದ ವಸ್ತುಗಳಲ್ಲಿ ಪಿನಾಪ್ತಲಿನ್ ಅಂಶ ಇರುವುದು ಧೃಢಪಟ್ಟಿರುತ್ತದೆ.

9) ಎದುರುದಾರರು ತಮ್ಮ ಸಮಜಾಯಿಷಿಯನ್ನು ದಿನಾಂಕ 03/08/2021 ರಂದು ಬರೆದು ದಿ: 09/08/2021ರಂದು ಸಲ್ಲಿಸಿರುತ್ತಾರೆ. ಸದರಿ ಸಮಜಾಯಿಸಿಯನ್ನು ಪರಿಶೀಲಿಸಲಾಗಿ ಎದುರುದಾರರು ಆಪಾದನೆಗಳನ್ನು ನಿರಾಕರಿಸಿರುವುದರ ಹೊರತಾಗಿ ಆಪಾದನೆಗಳನ್ನು ಅಲ್ಲಗೆಳೆಯಲು ಯಾವುದೇ ಪೂರಕ ದಾಖಲಾತಿಗಳನ್ನು ಸಲ್ಲಿಸಿರುವುದಿಲ್ಲ. ಆದ್ದರಿಂದ ಅವರು ನೀಡಿರುವ ಸಮಜಾಯಿಸಿ ಅಂಶಗಳ ಮೇರೆಗೆ ಪ್ರಕರಣವನ್ನು ಮುಕ್ತಾಯಗೊಳಿಸಲು ಸೂಕ್ತ ಕಾರಣಗಳು ಕಂಡುಬರುವುದಿಲ್ಲ.

10) ಸಾಕ್ಷಿದಾರರ ಹೇಳಿಕೆಗಳು, ದೂರು ಅರ್ಜಿ ಹಾಗೂ ತನಿಖಾಧಿಕಾರಿ ಸಂಗ್ರಹಿಸಿದ ದಾಖಲೆ ಮತ್ತು ಇತರ ಅಂಶಗಳು, ಎದುರುದಾರರ ಸತತವಾದ ದುರ್ನಡತೆಯನ್ನು ತೋರಿಸುತ್ತದೆ.

11) ಮೇಲ್ಕಂಡ ಅಂಶಗಳು, ಕಡತದ ಸಂಗತಿಗಳು, ದಾಖಲಾತಿಗಳನ್ನು ಮತ್ತು ಎದುರುದಾರರು ನೀಡಿರುವ ಉತ್ತರಗಳನ್ನು ಕೂಲಂಕುಷವಾಗಿ ಪರಿಶೀಲಿಸಿದಾಗ, ಸದರಿ ಎದುರುದಾರರು ತಮ್ಮ ವಿರುದ್ಧದ ನಡವಳಿಯನ್ನು ಕೈ ಬಿಡಲು ಸೂಕ್ತ/ಸಮಂಜಸ/ಸಮಾಧಾನಕರ ಕಾರಣ ತೋರಿಸಿಲ್ಲವೆಂದು ಅಭಿಪ್ರಾಯಕ್ಕೆ ಬರಲಾಗಿದೆ.

12) ಕಡತದಲ್ಲಿಯ ಸಂಗತಿಗಳು ಹಾಗೂ ದಾಖಲಾತಿಗಳಿಂದ, ಎದುರುದಾರರು ಸರ್ಕಾರಿ/ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠತೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡ ದುರ್ವರ್ತನೆ/ದುರ್ನಡತೆ ಮೇಲ್ನೋಟಕ್ಕೆ ಕಂಡುಬರುತ್ತದೆ.

13) ಅದಲ್ಲದೆ ಎದುರುದಾರರು ಸರ್ಕಾರಿ ನೌಕರರಾಗಿದ್ದು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966 ರ (ಪ್ರಸ್ತುತ ಕರ್ನಾಟಕ ನಾಗರಿಕ ಸೇವಾ(ನಡತೆ) 2021 ನಿಯಮ 3 (1) (i) ರಿಂದ (iii)ರ ಅಡಿಯಲ್ಲಿ ಮೇಲ್ನೋಟಕ್ಕೆ ದುರ್ನಡತೆ/ದುರ್ವರ್ತನೆ ಕಂಡು ಬರುವುದರಿಂದ, ಸದರಿಯವರ ವಿರುದ್ಧ ಇಲಾಖಾ ಶಿಸ್ತು ಕ್ರಮ ಕೈಗೊಳ್ಳಲು ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3) ರ ಅಡಿ ಪ್ರದತ್ತವಾದ ಅಧಿಕಾರದಡಿ, ಈಗ, ಈ ವರದಿ ಮೂಲಕ ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗುತ್ತಿದೆ ಹಾಗೂ ಎದುರುದಾರರ ವಿರುದ್ಧ ಇಲಾಖಾ ವಿಚಾರಣೆ ಮಾಡಲು, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 14(ಎ) ರಡಿ ಈ ಸಂಸ್ಥೆಗೆ ವಹಿಸಬೇಕೆಂದು ಕೋರಿದೆ.

14) ಮುಂದುವರೆದು, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(4) ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಕೈಗೊಂಡ ಅಥವಾ ಕೈಗೊಳ್ಳಲು ಉದ್ದೇಶಿಸಿರುವ ಕ್ರಮದ ಬಗ್ಗೆ ಈ ವರದಿ ಸ್ವೀಕರಿಸಿದ ಮೂರು ತಿಂಗಳೊಳಗೆ ಈ ಪ್ರಾಧಿಕಾರಕ್ಕೆ ತಿಳಿಸಲು ಹೇಳಿದೆ.

ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿದೆ.

21/10/21

(ನ್ಯಾಯಮೂರ್ತಿ ಬಿ.ಎಸ್. ಪಾಟೀಲ್)
ಉಪಲೋಕಾಯುಕ್ತರು
ಕರ್ನಾಟಕ ರಾಜ್ಯ, ಬೆಂಗಳೂರು.